## ಕರ್ನಾಟಕ ಸರ್ಕಾರ

ಸಂಖ್ಯೆ:ಗ್ರಾಅಪ:69:ಆರ್‌ಆರ್‌ಸಿ:2014

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ,
ಬೆಂಗಳೂರು,ದಿನಾಂಕ:14.01.2015.

### ಸುತ್ತೋಲೆ

**ವಿಷಯ:** ನಬಾರ್ಡ್ ಆರ್‌ಐಡಿಎಫ್ ಯೋಜನೆಯಡಿ ಮಂಜೂರಾದ ಕಾಮಗಾರಿಗಳ ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನೆ ಕುರಿತು.

**ಉಲ್ಲೇಖ:** ಉನ್ನತ ಮಟ್ಟದ ಸಮಿತಿಯ ಸಭೆಯಲ್ಲಿ ದಿನಾಂಕ:13.01.2015ರಂದು ಚರ್ಚಿಸಿದಂತೆ.

ಆರ್‌ಐಡಿಎಫ್ ಯೋಜನೆಯಡಿ ಮಂಜೂರಾದ ಕಾಮಗಾರಿಗಳನ್ನು ತೀವ್ರಗತಿಯಲ್ಲಿ ಅನುಷ್ಠಾನಗೊಳಿಸಿ ನಿಗಧಿತ ಸಮಯದಲ್ಲಿ ಕಾಮಗಾರಿಯು ಮುಕ್ತಾಯಗೊಳಿಸಿ ನಬಾರ್ಡ್ ಸಂಸ್ಥೆಗೆ ಮರುಪಾವತಿ ಕ್ಲೈಮ್ ಬಿಲ್ಲುಗಳನ್ನು ಹಾಗೂ ಕಾಮಗಾರಿ ಮುಕ್ತಾಯ ದೃಢೀಕರಣ ಪತ್ರವನ್ನು (PCR) ಸಲ್ಲಿಸಬೇಕಾಗಿರುತ್ತದೆ. ಆದುದರಿಂದ ಜಿಲ್ಲಾ ಪಂಚಾಯತಿಗೆ ಬಿಡುಗಡೆಯಾದ ಅನುದಾನವನ್ನು ತುರ್ತಾಗಿ ಅನುಷ್ಠಾನ ಸಂಸ್ಥೆಗೆ ಬಿಡುಗಡೆ ಮಾಡಿ ಕಾಮಗಾರಿ ಪೂರ್ಣಗೊಳಿಸುವಂತೆ ಕ್ರಮ ಜರುಗಿಸಲು ಕೋರಿದೆ.

ಈ ಹಿನ್ನೆಲೆಯಲ್ಲಿ ಜಿಲ್ಲಾ ಮಟ್ಟದಲ್ಲಿ ನಡೆಸುವ ಪ್ರಗತಿ ಪರಿಶೀಲನ ಸಭೆಯ ವಿಷಯ ಸೂಚಿಗಳಲ್ಲಿ ನಬಾರ್ಡ್ ಆರ್‌ಐಡಿಎಫ್ ನೆರವಿನ ಯೋಜನೆಗಳ ಮಾಹಿತಿಯನ್ನು ಸೇರಿಸುವುದು ಹಾಗೂ ಈ ಸಭೆಗೆ ಜಿಲ್ಲಾ ಮಟ್ಟದ ನಬಾರ್ಡ್ ಅಧಿಕಾರಿಗಳನ್ನು ಅಹ್ವಾನಿಸಿ ನಬಾರ್ಡ್ ನೆರವಿನ ರಸ್ತೆ, ಸೇತುವೆ ಮತ್ತು ಕಟ್ಟಡ ಕಾಮಗಾರಿಗಳ ಪ್ರಗತಿ ಪರಿಶೀಲಿಸಿ, ಯೋಜನೆಯನ್ನು ಚುರುಕುಗೊಳಿಸುವುದು ಮತ್ತು ಇದಕ್ಕೆ ಸಂಬಂಧಿಸಿದ ಪ್ರಗತಿಯ ವರದಿಗಳನ್ನು ಸರ್ಕಾರಕ್ಕೆ ಸಲ್ಲಿಸಲು ಕ್ರಮ ಕೈಗೊಳ್ಳಲು ಕೋರಿದೆ.

14/1/15

(ಬೂವನಹಳ್ಳಿ ನಾಗರಾಜ್)
ನಿರ್ದೇಶಕರು
ಸುವರ್ಣ ಗ್ರಾಮೋದಯ ಯೋಜನೆ ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಇವರಿಗೆ,**

ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
ಜಿಲ್ಲಾ ಪಂಚಾಯತ್.

**ಪ್ರತಿಯನ್ನು,**

1. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, 2ನೇ ಮಹಡಿ, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ಸರ್ಕಲ್, ಬೆಂಗಳೂರು.
2. ಮ್ಯಾನೇಜಿಂಗ್ ಡೈರೆಕ್ಟರ್, ಕರ್ನಾಟಕ ರೂರಲ್ ಇನ್‌ಫ್ರಾಸ್ಟ್ರಕ್ಚರ್ ಡೆವಲಪ್‌ಮೆಂಟ್ ಲಿ. ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ಸರ್ಕಲ್ ರಸ್ತೆ, ಬೆಂಗಳೂರು.